# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಹಾವೇರಿ

**ನೇಮಕಾತಿ ಅಧಿಸೂಚನೆ ಸಂಖ್ಯೆ : 01/2019, ದಿನಾಂಕ : 09-01-2019.**

**ವಿಷಯಃ** **ಹಾವೇರಿ ಜಿಲ್ಲಾ ಘಟಕದಲ್ಲಿ ಖಾಲಿ ಇರುವ 07 ಶೀಘ್ರಲಿಪಿಗಾರರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಕುರಿತು.**

**ಉಲ್ಲೇಖಃ**

1. ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆಃ ಎಲ್‌ಸಿಎ-2-128/2012, ದಿನಾಂಕಃ 13-02-2017, ದಿನಾಂಕಃ 02-08-2017, ದಿನಾಂಕಃ 01-08-2018, ದಿನಾಂಕಃ 18-09-2018 ಮತ್ತು ದಿನಾಂಕಃ 07-12-2018.
2. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಹಾವೇರಿ ಇವರ ನೇಮಕಾತಿ ಅಧಿಸೂಚನೆ ಸಂಖ್ಯೆ 03/2017 ದಿನಾಂಕಃ 30-06-2017, 04/2017 ದಿನಾಂಕಃ 26-10-2017 ಹಾಗೂ 01/2018 ದಿನಾಂಕಃ 05-01-2018.
3. ಈ ಕಛೇರಿ ಟಿಪ್ಪಣಿ ದಿನಾಂಕಃ 09-01-2019 ಹಾಗೂ ಅದರ ಮೇಲೆ ಆದ ಆದೇಶ.

******

ಹಾವೇರಿ ಜಿಲ್ಲೆಯ ಅಧೀನ ನ್ಯಾಯಾಲಯಗಳಲ್ಲಿ ಖಾಲಿ ಇರುವ **"ಶೀಘ್ರಲಿಪಿಗಾರರ"** ಹುದ್ದೆಗಳಿಗೆ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಿದ್ದು, ಇಚ್ಛೆಯುಳ್ಳ ಅಭ್ಯರ್ಥಿಗಳು ಅರ್ಜಿಯ ಎಲ್ಲಾ ಅಂಕಣಗಳನ್ನು ಭರ್ತಿ ಮಾಡಿ ಅರ್ಜಿಯ ಜೊತೆಗೆ ದಾಖಲಾತಿಗಳ ಸ್ವಯಂ ದೃಢೀಕೃತ ನೆರಳಚ್ಚು ಪ್ರತಿಗಳನ್ನು ಲಗತ್ತಿಸಿ, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಹಾವೇರಿ, ಈ ವಿಳಾಸಕ್ಕೆ ನಿಗದಿತ ಅವಧಿಯೊಳಗಾಗಿ ಸಲ್ಲಿಸತಕ್ಕದ್ದು.

**ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕಃ 15-02-2019**
**ಸಾಯಂಕಾಲ 05-45 ಘಂಟೆಯವರೆಗೆ.**

**ವಿಶೇಷ ಸೂಚನೆಃ**

1. ಅರ್ಜಿಗಳು ಕಡ್ಡಾಯವಾಗಿ ನಿಗದಿತ ನಮೂನೆಯಲ್ಲಿಯೇ ಇರಬೇಕು.
2. ಅರ್ಜಿಯನ್ನು ಈ ಕಛೇರಿಯಿಂದ ಮಾರಾಟ ಮಾಡಲಾಗುವುದಿಲ್ಲ, ಈ ಕಛೇರಿಯ ವೆಬ್‌ಸೈಟ್ http://ecourts.gov.in/haveri/recruitmentನಲ್ಲಿ ಪ್ರತಿ ತೆಗೆದುಕೊಂಡು ಅರ್ಜಿ ಸಲ್ಲಿಸಬಹುದು.

❖ **ಶೀಘ್ರಲಿಪಿಗಾರರ ಹುದ್ದೆಗಳ ಸಂಖ್ಯೆ: 07**

❖ **ಹುದ್ದೆಗಳ ವರ್ಗೀಕರಣ:**

**ಹಿಂಬಾಕಿ ಹುದ್ದೆಗಳು: 04.**

| ಮೀಸಲಾತಿ. | ಮಹಿಳಾ ಅಭ್ಯರ್ಥಿ. | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ. | ಅಂಗವಿಕಲ ಅಭ್ಯರ್ಥಿ. | ಒಟ್ಟು |
|---|---|---|---|---|
| ಸಾಮಾನ್ಯ ವರ್ಗ | -- | -- | 01 | **01** |
| ಪರಿಶಿಷ್ಟ ಜಾತಿ | -- | 01 | -- | **01** |
| ಪ್ರ.ವರ್ಗ-2ಎ | -- | 01 | -- | **01** |
| ಪ್ರ.ವರ್ಗ-2ಬಿ | 01 | -- | -- | **01** |
| ಒಟ್ಟು. | **01** | **02** | **01** | **04** |

**ಖಾಲಿ ಇರುವ ಹುದ್ದೆಗಳು: 03.**

| ಮೀಸಲಾತಿ. | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಒಟ್ಟು |
|---|---|---|---|---|
| ಸಾಮಾನ್ಯ ಅಭ್ಯರ್ಥಿ | 01 | 01 | -- | **02** |
| ಪರಿಶಿಷ್ಟ ಜಾತಿ | -- | -- | 01 | **01** |
| ಒಟ್ಟು. | **01** | **01** | **01** | **03** |

➤ **ವೇತನ ಶ್ರೇಣಿ** :27650-650-29600-750-32600-850-36000-950-39800-1100-46400-1250-52650 ಹಾಗೂ ಇತರೆ ಭತ್ಯೆಗಳು.

➤ **ವಿದ್ಯಾರ್ಹತೆ:-**

1. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.
2. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಪ್ರೌಢ ದರ್ಜೆಯ ಕನ್ನಡ ಮತ್ತು ಆಂಗ್ಲ ಭಾಷೆಗಳ ಶೀಘ್ರಲಿಪಿ ಹಾಗೂ ಪ್ರೌಢ ದರ್ಜೆಯ ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.
3. ಅಥವಾ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್‌ನಲ್ಲಿ ಕನ್ನಡ ಮತ್ತು ಆಂಗ್ಲ ಭಾಷೆಗಳ ಪ್ರೌಢ ದರ್ಜೆಯ ಶೀಘ್ರಲಿಪಿ ಮತ್ತು ಪ್ರೌಢ ಬೆರಳಚ್ಚು ಪರೀಕ್ಷೆ ತೇರ್ಗಡೆ ಹೊಂದಿರಬೇಕು.

## ➢ ಆಯ್ಕೆ ವಿಧಾನಃ-

1. ಅಭ್ಯರ್ಥಿಗಳ ಆಯ್ಕೆಯನ್ನು ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) ನಿಯಮಗಳು 1982 ಮತ್ತು ತಿದ್ದುಪಡಿ ನಿಯಮಗಳು 2007ರ ಅನ್ವಯ ಮಾಡಲಾಗುವುದು.
2. ಶೀಘ್ರಲಿಪಿಗಾರ ಹುದ್ದೆಗೆ ಒಂದು ನಿಮಿಷಕ್ಕೆ 120 ಶಬ್ದಗಳಂತೆ 5 ನಿಮಿಷಗಳ ಉಕ್ತ ಲೇಖನವನ್ನು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ನೀಡಲಾಗುವುದು. ಅದನ್ನು ಲಿಪ್ಯಂತರಗೊಳಿಸಿ, ಬೆರಳಚ್ಚು ಮಾಡಲು 45 ನಿಮಿಷಗಳ ಕಾಲಾವಕಾಶ ನೀಡಲಾಗುವುದು. ಇದಕ್ಕೆ 100 ಗರಿಷ್ಠ ಅಂಕಗಳನ್ನು ನಿಗದಿಪಡಿಸಿದ್ದು, ಸಂದರ್ಶನಕ್ಕೆ ಅರ್ಹತೆ ಹೊಂದಲು ಕನಿಷ್ಠ 50 ಅಂಕಗಳನ್ನು ಪಡೆಯಬೇಕಾಗುವುದು.
3. ಅಭ್ಯರ್ಥಿಯು ಹುದ್ದೆಗೆ ನಿಗದಿಪಡಿಸಲಾದ ಕನಿಷ್ಠ ವಿದ್ಯಾರ್ಹತೆಯಲ್ಲಿ ಪಡೆದ ಅಂಕಗಳು, ಹಾಗೂ ನೇಮಕಾತಿ ಪ್ರಾಧಿಕಾರವು ನಡೆಸುವ ಕನ್ನಡ ಮತ್ತು ಆಂಗ್ಲ ಶೀಘ್ರಲಿಪಿ ಹಾಗೂ ಬೆರಳಚ್ಚು ಪರೀಕ್ಷೆಯಲ್ಲಿ ಪಡೆದ ಅಂಕಗಳು ಮತ್ತು ಸಂದರ್ಶನದಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಲ್ಲಿ, ಮಹಿಳಾ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು, ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ಗ್ರಾಮೀಣ ಅಭ್ಯರ್ಥಿಗಳು ಹಾಗೂ ಕನ್ನಡ ಮಾಧ್ಯಮ ಅಭ್ಯರ್ಥಿಗಳು ಮೀಸಲಾತಿಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ, ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

ಸಂದರ್ಶನಕ್ಕೆ ಆಯ್ಕೆಯಾಗುವ ಅಭ್ಯರ್ಥಿಗಳು ಸಂದರ್ಶನಕ್ಕೆ ಹಾಜರಾಗಲು ಕರೆ ಬಂದಾಗ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಹಾವೇರಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.

➢ **ವಯೋಮಿತಿಃ** ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಈ ಕೆಳಕಂಡ ವಯೋಮಿತಿಯನ್ನು ಹೊಂದಿರತಕ್ಕದ್ದು.

1. ಕನಿಷ್ಠ ವಯೋಮಿತಿ 18 ವರ್ಷ
2. ಗರಿಷ್ಠ ವಯೋಮಿತಿ ಈ ಕೆಳಗಿನಂತೆಃ

| | |
|---|---|
| ಸಾಮಾನ್ಯ ವರ್ಗ | **35 ವರ್ಷ** |
| ಪ್ರವರ್ಗ-2ಎ, 2ಬಿ, 3ಎ, 3ಬಿ | **38 ವರ್ಷ** |
| ಪ. ಜಾತಿ, ಪ. ಪಂಗಡ, ಪ್ರವರ್ಗ-1 | **40 ವರ್ಷ** |

ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಗರಿಷ್ಠ ವಯಸ್ಸು ಮೀರಿರಕೂಡದು.

➢ **<u>ವಯೋಮಿತಿ ಸಡಿಲಿಸುವ ಕುರಿತುಃ</u>**

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಆಯಾ ಅಭ್ಯರ್ಥಿಗಳಿಗೆ ನಮೂದಿಸಿರುವ ಮಟ್ಟಿಗೆ ಹೆಚ್ಚಿಸಲಾಗುವುದು.

1. ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳ ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಲಿಕೆಯನ್ನು ನೀಡಲಾಗುವುದು.

2. ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ, ಅವನು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

3. ಅಭ್ಯರ್ಥಿಯು ಅಂಗವಿಕಲನಾಗಿದ್ದಲ್ಲಿ, ವಿಧವೆಯಾಗಿದ್ದಲ್ಲಿ ಮತ್ತು ಜೀತ ಕಾರ್ಮಿಕನಾಗಿದ್ದಲ್ಲಿ 10 ವರ್ಷಗಳು.

4. ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸೇವೆ ಸಲ್ಲಿಸಿದ್ದಾರೆ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

5. ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣ ಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕನಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

6. ಅಭ್ಯರ್ಥಿಗಳು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ ವರ್ಷಗಳು.

➢ **<u>ಪರಿವೀಕ್ಷಣಾ ಅವಧಿಃ</u>**

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಅವರುಗಳ ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು.

ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ ಸಿಆಸುಇ 43 ಸೇವನೆ 2008 ದಿನಾಂಕಃ 7.3.2012 ಹಾಗೂ ಕಾಲ ಕಾಲಕ್ಕೆ ತಿದ್ದುಪಡಿಯಾದ ಸರ್ಕಾರಿ ಆದೇಶಗಳನ್ವಯ ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸರ್ಕಾರ ನಿಗದಿಪಡಿಸುವ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

## ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ವಿಧಾನಃ

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣಪತ್ರವನ್ನು ನಿಗದಿತ ದಿನಾಂಕದೊಳಗೆ ಪಡೆದು ಅರ್ಜಿಗಳನ್ನು ಸಲ್ಲಿಸಬೇಕು.

## ➢ ಅರ್ಜಿ ಸಲ್ಲಿಸುವ ವಿಧಾನಃ

ಅಧಿಸೂಚನೆಯ ಪ್ರತಿಯನ್ನು ಹಾಗೂ ನಿಗದಿತ ಅರ್ಜಿ ನಮೂನೆಯನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಹಾವೇರಿಯ ಅಂತರ್ಜಾಲದ ವಿಳಾಸ http://ecourts.gov.in/haveri/recruitmentದಿಂದ ಪಡೆದು, ತಮಗೆ ಅನ್ವಯಿಸುವ ಎಲ್ಲಾ ಅಂಕಣಗಳನ್ನು ಭರ್ತಿ ಮಾಡುವುದು. ಅಭ್ಯರ್ಥಿಯು ತಮ್ಮ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಅರ್ಜಿ ನಮೂನೆಯಲ್ಲಿ ನಿಗದಿಪಡಿಸಿರುವ ಸ್ಥಳದಲ್ಲಿ ಅಂಟಿಸಿ, ಅದರ ಮೇಲೆ ಸಹಿ ಮಾಡುವುದು ಹಾಗೂ ಅರ್ಜಿ ನಮೂನೆಯ ಕೊನೆಯಲ್ಲಿ ಘೋಷಣೆಯ ನಂತರ ಸಹಿ ಮಾಡುವುದು. ಹುದ್ದೆಗೆ ಸಂಬಂಧಿಸಿದ ವಿದ್ಯಾರ್ಹತೆ, ವಯಸ್ಸು ಮತ್ತು ಕೋರಿರುವ ಮೀಸಲಾತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರಗಳನ್ನು ಅಧಿಕೃತ ಅಧಿಕಾರಿಗಳಿಂದ ಪಡೆದು, ಅವುಗಳ ನೆರಳಚ್ಚು ಪ್ರತಿಗಳನ್ನು ಸ್ವಯಂ ದೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಿ ಸದರಿ ಅರ್ಜಿಯನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಹಾವೇರಿ ಇವರಿಗೆ **ದಿನಾಂಕ: 15-02-2019 ಸಂಜೆ 5-45** ಘಂಟೆಯ ಒಳಗೆ ತಲುಪುವಂತೆ ಕಳುಹಿಸುವುದು. ಅರ್ಜಿಯನ್ನು ಕಳುಹಿಸುವ ಲಕೋಟೆಯ ಮೇಲೆ ಅಭ್ಯರ್ಥಿಯು **"ಶೀಘ್ರಲಿಪಿಗಾರರ ಹುದ್ದೆಗೆ"** ಎಂದು ಹುದ್ದೆಯ ಹೆಸರನ್ನು ತಪ್ಪದೇ ನಮೂದಿಸುವುದು.

## ➢ ಅಭ್ಯರ್ಥಿಗಳು ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳುಃ

1. ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ.
2. ಜನ್ಮ ದಿನಾಂಕದ ದೃಢೀಕರಣಕ್ಕಾಗಿ ವರ್ಗಾವಣೆ ಪ್ರಮಾಣ ಪತ್ರ / ಕ್ಯುಮುಲೇಟಿವ್ ರೆಕಾರ್ಡ್/ ಎಸ್.ಎಸ್.ಎಲ್.ಸಿ ಅಂಕಪಟ್ಟಿ.
3. ವಿದ್ಯಾರ್ಹತೆ ಬಗ್ಗೆ ಅಂಕಪಟ್ಟಿಗಳು.
4. ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಬಗ್ಗೆ ಸ್ವಯಂ ದೃಢೀಕೃತ ಅಂಕಪಟ್ಟಿಗಳ ನೆರಳಚ್ಚು ಪ್ರತಿಗಳನ್ನು ಕಡ್ಡಾಯವಾಗಿ ಅರ್ಜಿಯ ಜೊತೆಗೆ ಲಗತ್ತಿಸತಕ್ಕದ್ದು, ಇಲ್ಲವಾದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
5. ಅಭ್ಯರ್ಥಿಗಳು ಲಕೋಟೆಯ ಮೇಲೆ **"ಶೀಘ್ರಲಿಪಿಗಾರರ ಹುದ್ದೆಗೆ"** ಎಂದು ಕಡ್ಡಾಯವಾಗಿ ನಮೂದಿಸತಕ್ಕದ್ದು.
6. ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ದಿನಾಂಕದಿಂದ 6 ತಿಂಗಳ ಒಳಗಿರುವ ಹಾಗೂ ಅರ್ಜಿದಾರರಿಗೆ ಸಂಬಂಧಿಕರಲ್ಲದ ಸ್ಥಳೀಯ ಇಬ್ಬರು ಗಣ್ಯ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು.

7. ಅರ್ಜಿಯ ಜೊತೆ ಅಭ್ಯರ್ಥಿಯು ವ್ಯಾಸಂಗ ಮಾಡಿದ ಶಾಲೆ / ವಿದ್ಯಾಲಯದಿಂದ ಪಡೆದ ಒಂದು ನಡತೆ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.
8. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ 'ಡಿ'ಯಲ್ಲಿ, ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ 'ಇ'ಯಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ 'ಎಫ್'ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪಡೆದು ಸಲ್ಲಿಸಬೇಕು.
9. ಗ್ರಾಮಿಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆಃಸಿಆಸುಇ/96/ಸೇನನಿ/2005, ದಿನಾಂಕಃ 10-8-2005ರ ಪ್ರಕಾರ ನಿಗದಿತ ನಮೂನೆ-2ರಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ ಸಲ್ಲಿಸಬೇಕು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.
10. ಕನ್ನಡ ಮಾಧ್ಯಮ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೇಲು ರುಜು ಇರುವ ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸುವುದು.
11. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ 19.11.2005ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆಃ ಸಿಆಸುಇ/115/ಸೇನನಿ/2005ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸಬೇಕು.
12. ಯೋಜನಾ ನಿರಾಶ್ರಿತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆಃ ಸಿಆಸುಇ/44/ಸೇನನಿ/2001ರ ದಿನಾಂಕಃ 27-7-2001ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.
13. ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ / ವಿಮುಕ್ತಿ ಹೊಂದಿದ ಬಗ್ಗೆ ಪ್ರಮಾಣ ಪತ್ರವನ್ನು ಸಲ್ಲಿಸುವುದು.
14. ವಿಧವೆಯರು, ಜೀತ ಕಾರ್ಮಿಕರು ಮತ್ತು ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸುವುದು.

➢ **ವಿಶೇಷ ಸೂಚನೆಗಳುಃ-**

- ಅರ್ಜಿಯೊಂದಿಗೆ ಲಗತ್ತಿಸುವ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದು ಲಗತ್ತಿಸಿರಬೇಕು ಇಲ್ಲವೇ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು ಮತ್ತು ಕಡ್ಡಾಯವಾಗಿ ಸ್ವಯಂ ದೃಢೀಕರಿಸಿರಬೇಕು.

- ಅರ್ಜಿ ನಮೂನೆಯಲ್ಲಿ ಅಭ್ಯರ್ಥಿಯ ಖಾಯಂ ವಿಳಾಸವನ್ನು ಕಡ್ಡಾಯವಾಗಿ ನಮೂದಿಸಬೇಕು. ಒಂದು ವೇಳೆ ಅಭ್ಯರ್ಥಿಯ ವಿಳಾಸ ಬದಲಾವಣೆಯಾದಲ್ಲಿ ತಕ್ಷಣವೇ ಈ ಕಛೇರಿಗೆ ಮಾಹಿತಿ ನೀಡಬೇಕು. ತಪ್ಪಿದಲ್ಲಿ ಮುಂದಿನ ಪತ್ರ ವ್ಯವಹಾರಗಳಿಗೆ ಅಭ್ಯರ್ಥಿಗಳೇ ಜವಾಬ್ದಾರರು ಇರುತ್ತಾರೆ.
- ಅಭ್ಯರ್ಥಿಗಳು ನೇಮಕಾತಿ ಪ್ರಾಧಿಕಾರವು (ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಹಾವೇರಿ) ನಿಗದಿಪಡಿಸಿದ ಅರ್ಜಿ ನಮೂನೆಯಲ್ಲಿಯೇ ಅರ್ಜಿಗಳನ್ನು ಬೆರಳಚ್ಚು ಮಾಡಿ ಅಥವಾ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿದ ನಂತರ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸತಕ್ಕದ್ದು, ಇಲ್ಲವಾದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
- ಯಾವುದೇ ಅಭ್ಯರ್ಥಿಯು ಸಂದರ್ಶನದ ಬಗ್ಗೆ ಮಾಹಿತಿ ಬರದಿದ್ದರೆ, ಅಂಥವರು ಸಂದರ್ಶನಕ್ಕೆ ಅರ್ಹರಲ್ಲ ಎಂದು ತಿಳಿಯುವುದು ಮತ್ತು ಈ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಮಾಡಲಾಗುವುದಿಲ್ಲ.
- ಈ ಅಧಿಸೂಚನೆಯು ಚಾಲ್ತಿಯಲ್ಲಿರುವ ಮತ್ತು ಕಾಲ ಕಾಲಕ್ಕೆ ಸರ್ಕಾರದಿಂದ ಹೊರಡಿಸಲ್ಪಡುವ ಆದೇಶಗಳಿಗೆ ಒಳಪಟ್ಟಿರುತ್ತದೆ.
- ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ದಿನಾಂಕವು ಸಾರ್ವಜನಿಕ ರಜೆಯಾಗಿದ್ದರೆ ಮುಂದಿನ ಕಛೇರಿ ಕೆಲಸದ ದಿನ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವೆಂದು ತಿಳಿಯುವುದು.

ಮೇಲಿನ ಸೂಚನೆಗಳಿಗೆ ಅನುಸಾರವಾಗಿ ದಾಖಲೆಗಳನ್ನು ಒದಗಿಸಲು ತಪ್ಪಿದ್ದಲ್ಲಿ, ಅಂತಹ ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಲಾಗುವುದು.

ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸಿರುವನೆಂದು ಕಂಡುಬಂದಲ್ಲಿ ಅವನು/ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೇ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

ಸಹಿ/-

ಸ್ಥಳ ： ಹಾವೇರಿ

ದಿನಾಂಕಃ 09-01-2019.

*(ಎಸ್. ಎಚ್. ರೇಣುಕಾದೇವಿ)*

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

ಹಾವೇರಿ.

# ಅರ್ಜಿ ನಮೂನೆ

| ಸ್ವದೃಢೀಕರಿಸಿದ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಅಂಟಿಸಬೇಕು |
|---|

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
**ಹಾವೇರಿ** – ಇವರಿಗೆ

ಮಾನ್ಯರೇ,

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಹಾವೇರಿ, ಇವರ **ಅಧಿಸೂಚನೆ ಸಂಖ್ಯೆ:**01/2019 **ದಿನಾಂಕಃ** 09-01-2019**ರ** ಪ್ರಕಾರ ನಾನು ಕೆಳಕಂಡ ಮಾಹಿತಿಗಳೊಂದಿಗೆ **ಶೀಘ್ರಲಿಪಿಗಾರರ ಹುದ್ದೆಗೆ** ಅರ್ಜಿಯನ್ನು ಸಲ್ಲಿಸುತ್ತಿದ್ದೇನೆ.

| | | | | |
|---|---|---|---|---|
| 01 | ಅಭ್ಯರ್ಥಿಯ ಹೆಸರು<br>**(ದಪ್ಪ ಅಕ್ಷರಗಳಲ್ಲಿ)** | | | |
| 02 | ತಂದೆ / ಗಂಡನ ಹೆಸರು | | | |
| 03 | ತಾಯಿಯ ಹೆಸರು | | | |
| 04 | ಜನ್ಮ ದಿನಾಂಕ | | | |
| 05 | ವಯಸ್ಸು<br>(ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಅಭ್ಯರ್ಥಿಯ ವಯಸ್ಸು) | ವರ್ಷಗಳು | ತಿಂಗಳುಗಳು | ದಿನಗಳು |
| | | | | |
| 06 | ಅಭ್ಯರ್ಥಿಯ ಖಾಯಂ ವಿಳಾಸ | | | |
| 07 | ಅಭ್ಯರ್ಥಿಯ ಮೊಬೈಲ್‌ಃ ದೂರವಾಣಿ ಸಂಖ್ಯೆ. | | | |
| 08 | ಲಿಂಗ | ಪುರುಷ / ಮಹಿಳೆ | | |
| 09 | ರಾಷ್ಟ್ರೀಯತೆ ಮತ್ತು ಧರ್ಮ | | | |
| 10 | ಜಾತಿ / ಉಪಜಾತಿ | | | |
| 11 | ವಿವಾಹಿತರಾದಲ್ಲಿ ಒಬ್ಬರಿಗಿಂತ ಹೆಚ್ಚು ಜೀವಂತ ಗಂಡ ಅಥವಾ ಹೆಂಡತಿ ಇದ್ದಾರೆಯೇ? | | | |
| 12 | ನೀವು ಯಾವುದಾದರೂ ಕ್ರಿಮಿನಲ್ ಮೊಕದ್ದಮೆಯಲ್ಲಿ ಭಾಗಿಯಾಗಿದ್ದೀರೋ? | | | |
| 13 | ನೀವು ಸರ್ಕಾರಿ ಸೇವೆಯಿಂದ ಅಥವಾ ಇನ್ನಾವುದಾದರೂ ಸೇವೆಯಿಂದ ವಜಾ ಆಗಿದ್ದೀರಾ ಅಥವಾ ತೆಗೆದುಹಾಕಲ್ಪಟ್ಟಿದ್ದೀರಾ? | | | |

| | | | |
|---|---|---|---|
| 14 | ನೀವು ಪ್ರಸ್ತುತ ಸರ್ಕಾರಿ ಸೇವೆಯಲ್ಲಿರುವಿರಾ? (ಸರ್ಕಾರಿ ಸೇವೆಯಲ್ಲಿದ್ದಲ್ಲಿ, ನೇಮಕಾತಿ ಪ್ರಾಧಿಕಾರದಿಂದ ಪಡೆದ ನಿರಾಕ್ಷೇಪಣಾ ಪತ್ರದ ಪ್ರತಿಯನ್ನು ಕಡ್ಡಾಯವಾಗಿ ಲಗತ್ತಿಸಬೇಕು) | ಹೌದು ( ) | ಇಲ್ಲ ( ) |

| | | | | | |
|---|---|---|---|---|---|
| 15 | ಕೋರುವ ಮೀಸಲಾತಿಗಳು<br>(ಕೋರುವ ಮೀಸಲಾತಿಯನ್ನು ✔ ಚಿಹ್ನೆ ಹಾಕುವುದರ ಮೂಲಕ ಗುರುತಿಸಿ, ಪ್ರಮಾಣಪತ್ರದ ಸ್ವಯಂ ದೃಢೀಕೃತ ನೆರಳಚ್ಚು ಪ್ರತಿಯನ್ನು ಲಗತ್ತಿಸಬೇಕು) | ಸಾಮಾನ್ಯ | ಪ.ಜಾತಿ | ಪ.ಪಂಗಡ | ಪ್ರವರ್ಗ-1 |
| | | | | | |
| | | 2-ಎ | 2-ಬಿ | 3-ಎ | 3-ಬಿ |
| | | | | | |

| | | | | | | |
|---|---|---|---|---|---|---|
| 16 | ನೀವು ಈ ಯಾವುದಾದರೂ ಮೀಸಲಾತಿ ಅಡಿಯಲ್ಲಿ ಬರುತ್ತೀರಾ?<br>(ಸೇರುವ ಮೀಸಲಾತಿಯನ್ನು ✔ ಚಿಹ್ನೆ ಹಾಕುವುದರ ಮೂಲಕ ಗುರುತಿಸಿ, ಪ್ರಮಾಣಪತ್ರದ ಸ್ವಯಂ ದೃಢೀಕೃತ ನೆರಳಚ್ಚು ಪ್ರತಿಯನ್ನು ಲಗತ್ತಿಸಬೇಕು) | ಗ್ರಾಮೀಣ | ಕ.ಮಾ.ಅ | ಮಾ.ಸೈ | ಅಂ. ಅ | ಯೋ.ನಿ.ಅ |
| | | | | | | |

| | | | | | |
|---|---|---|---|---|---|
| 16 | ಶೈಕ್ಷಣಿಕ ವಿದ್ಯಾರ್ಹತೆ (ಸ್ವಯಂ ದೃಢೀಕೃತ ನೆರಳಚ್ಚು ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು) | ಉತ್ತೀರ್ಣ ಹೊಂದಿದ ವರ್ಷ | ಗರಿಷ್ಠ ಅಂಕಗಳು | ಪಡೆದ ಅಂಕಗಳು | ಶೇಕಡಾವಾರು ಅಂಕಗಳು |
| | ಎಸ್.ಎಸ್.ಎಲ್.ಸಿ. | | | | |
| | ಪ್ರೌಢ ದರ್ಜೆಯ ಕನ್ನಡ ಬೆರಳಚ್ಚು | | | | |
| | ಪ್ರೌಢ ದರ್ಜೆಯ ಆಂಗ್ಲ ಬೆರಳಚ್ಚು | | | | |
| | ಪ್ರೌಢ ದರ್ಜೆಯ ಕನ್ನಡ ಶೀಘ್ರಲಿಪಿ | | | | |
| | ಪ್ರೌಢ ದರ್ಜೆಯ ಆಂಗ್ಲ ಶೀಘ್ರಲಿಪಿ | | | | |
| | ಗಣಕಯಂತ್ರದ ಜ್ಞಾನ | | | | |
| 17 | ಇತರೆ ವಿದ್ಯಾರ್ಹತೆ ಅಥವಾ ತರಬೇತಿ ಇದ್ದಲ್ಲಿ | | | | |

ಸೂಚನೆಃ ಅಭ್ಯರ್ಥಿಗಳು ಎಲ್ಲಾ ಕಾಲಂಗಳನ್ನು ಕಡ್ಡಾಯವಾಗಿ ಭರ್ತಿ ಮಾಡತಕ್ಕದ್ದು.

## ಃ ಘೋಷಣೆ ಃ

ಈ ಮೇಲ್ಕಂಡ ಮಾಹಿತಿಗಳು ನನಗೆ ತಿಳಿದ ಮಟ್ಟಿಗೆ ಸತ್ಯ ಮತ್ತು ಸರಿಯಾಗಿದೆ ಎಂದು ಪ್ರಮಾಣೀಕರಿಸುತ್ತೇನೆ. ಒಂದು ವೇಳೆ ಮೇಲ್ಕಂಡ ಮಾಹಿತಿಗಳು ತಪ್ಪು ಎಂದು ಕಂಡು ಬಂದಲ್ಲಿ ನನ್ನ ಅರ್ಜಿಯನ್ನು ರದ್ದುಪಡಿಸಬಹುದು ಎಂದು ಈ ಮೂಲಕ ಘೋಷಿಸುತ್ತೇನೆ.

ಸ್ಥಳ ಃ — ಅಭ್ಯರ್ಥಿಯ ಸಹಿ

ದಿನಾಂಕಃ

ಪ್ರತಿಯನ್ನು ಗೌರವಗಳೊಂದಿಗೆ ಮಾಹಿತಿಗಾಗಿ:-

1. ಮಹಾ ವಿಲೇಖನಾಧಿಕಾರಿಗಳು, ಗೌರವಾನ್ವಿತ ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು ಇವರಿಗೆ ಮುಖಪತ್ರದೊಂದಿಗೆ.

ಪ್ರತಿಯನ್ನು :

2. ಪ್ರಧಾನ ನಗರ ಸಿವಿಲ್ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ನಗರ ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಗ್ರಾಮಾಂತರ ಜಿಲ್ಲೆ/ ಬೆಳಗಾವಿ/ ಬಳ್ಳಾರಿ/ ಬೀದರ/ ಬಾಗಲಕೋಟ/ ವಿಜಯಪುರ/ ಚಾಮರಾಜನಗರ/ ಚಿಕ್ಕಮಗಳೂರು/ ಚಿಕ್ಕಬಳ್ಳಾಪುರ/ ಚಿತ್ರದುರ್ಗ/ ದಾವಣಗೇರೆ/ ಧಾರವಾಡ/ ಗದಗ/ ಕಲಬುರಗಿ/ ಹಾಸನ/ ಕೋಲಾರ/ ಕೊಪ್ಪಳ/ ಕೊಡಗು-ಮಡಿಕೇರಿ/ ಮಂಡ್ಯ/ ಮೈಸೂರು/ ಮಂಗಳೂರು/ ರಾಯಚೂರು/ ರಾಮನಗರ/ ಶಿವಮೊಗ್ಗ/ ತುಮಕೂರು/ ಉಡುಪಿ/ ಉತ್ತರ ಕನ್ನಡ/ ಯಾದಗಿರಿ ಇವರಿಗೆ ಮಾಹಿತಿಗಾಗಿ ಮತ್ತು ವ್ಯಾಪಕ ಪ್ರಚಾರಕ್ಕಾಗಿ.
3. ನಿರ್ದೇಶಕರು, ವಾರ್ತಾ, ಪ್ರಚಾರ ಮತ್ತು ಪ್ರವಾಸೋದ್ಯಮ ಇಲಾಖೆ, ಬೆಂಗಳೂರು, ಇವರಿಗೆ ಸಾದಿಲ್ವಾರು ವೆಚ್ಚ ಕೈಪಿಡಿ ನಿಯಮ 55 (ಬಿ) (ಡಿ) ಪ್ರಕಾರ 2 ಹೆಚ್ಚು ಪ್ರಸಾರವಾಗುವ ದಿನ ಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಿಸಿ ಪ್ರಕಟಣೆಯ 5 ಪ್ರತಿಗಳನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಲು ಕೋರಲಾಗಿದೆ.
4. ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು-560059, ಇವರಿಗೆ ಪ್ರಕಟಣೆಯನ್ನು ಮುಂದಿನ ರಾಜ್ಯಪತ್ರದಲ್ಲಿ ಉಚಿತವಾಗಿ ಪ್ರಕಟಿಸಿ ಪ್ರಕಟಣೆಯ 5 ಪ್ರತಿಗಳನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಲು ಕೋರಲಾಗಿದೆ.
5. ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ ಅಧಿಕಾರಿಗಳು, ಹಾವೇರಿ, ಇವರಿಗೆ ಮಾಹಿತಿಗಾಗಿ ಮತ್ತು ವ್ಯಾಪಕ ಪ್ರಚಾರಕ್ಕಾಗಿ.
6. ಹಾವೇರಿ ಜಿಲ್ಲೆಯ ಎಲ್ಲಾ ಅಧೀನ ನ್ಯಾಯಾಲಯಗಳಿಗೆ ಮಾಹಿತಿಗಾಗಿ ಮತ್ತು ಸೂಚನಾ ಫಲಕಕ್ಕೆ ಲಗತ್ತಿಸಲು ಕಳುಹಿಸಲಾಗಿದೆ.
7. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಹಾವೇರಿ, ಸೂಚನಾ ಫಲಕಕ್ಕೆ.

"ನ್ಯಾಯಾಲಯದ ಆದೇಶದ ಮೇರೆಗೆ"

(ಹರೀಶಪ್ಪ ಟಿ.ಆರ್.)
ಮುಖ್ಯ ಆಡಳಿತಾಧಿಕಾರಿಗಳು,
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,
ಹಾವೇರಿ.